# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕರ್ನಾಟಕ ಪಬ್ಲಿಕ್ ಶಾಲೆ (KPS), ಬೆಂಗಳೂರು ಪಬ್ಲಿಕ್ ಶಾಲೆ (BPS) ಹಾಗೂ ಪಿ.ಎಂ ಶ್ರೀ ಶಾಲೆಗಳಲ್ಲಿ ದ್ವಿ-ಭಾಷಾ ಮಾಧ್ಯಮದ (Bilingual Classes) ತರಗತಿಗಳಿಗೆ ಮಕ್ಕಳ ಗರಿಷ್ಠ ದಾಖಲಾತಿ ಮಿತಿಯನ್ನು ಹೆಚ್ಚಳ ಮಾಡುವ ಬಗ್ಗೆ.

**ಓದಲಾಗಿದೆ :**

1. ಸರ್ಕಾರದ ಆದೇಶ ಸಂಖ್ಯೆ ಇಡಿ 111 ಯೋಯೋಕ 2018, ದಿನಾಂಕ:17.05.2019.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 04 ಯೋಯೋಕ 2017 ದಿನಾಂಕ:05.01.2008.
3. ಸರ್ಕಾರಿ ಆದೇಶ ಸಂಖ್ಯೆ ಇಡಿ 66 ಪಿಜಿಸಿ 2020 ದಿನಾಂಕ:14.09.2020.
4. ಸರ್ಕಾರದ ಆದೇಶ EP 154 ಪಿಜಿಸಿ 2024 ದಿನಾಂಕ:15-10-2024.

*****************

**ಪ್ರಸ್ತಾವನೆ:**

ರಾಜ್ಯದಲ್ಲಿ 2017-18ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಹಂತ-ಹಂತವಾಗಿ 308 ಕರ್ನಾಟಕ ಪಬ್ಲಿಕ್ ಶಾಲೆ (KPS)ಗಳನ್ನು ಪ್ರಾರಂಭಿಸಲಾಗಿದೆ. ಈ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ (KPS) ಪೂರ್ವ ಪ್ರಾಥಮಿಕ (LKG & UKG) ತರಗತಿಗಳನ್ನು ಹಾಗೂ ಈಗಾಗಲೇ ನಡೆಯುತ್ತಿರುವ ಕನ್ನಡ / ಇತರೆ ಮಾಧ್ಯಮದ ತರಗತಿಗಳೊಂದಿಗೆ ಒಂದನೇ ತರಗತಿಯಿಂದ ದ್ವಿ-ಭಾಷಾ ಮಾಧ್ಯಮ (Bilingual), ತರಗತಿಗಳನ್ನು ಸಹ ಪ್ರಾರಂಭ ಮಾಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (1) ರಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ (KPS) ಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಯನ್ನು ಪ್ರಾರಂಭಿಸಲು ವಿಧಿಸಿರುವ ಷರತ್ತುಗಳಂತೆ ಪೂರ್ವ ಪ್ರಾಥಮಿಕ ಒಂದು ವಿಭಾಗದಲ್ಲಿ 20 ರಿಂದ 30 ಮಕ್ಕಳನ್ನು ದಾಖಲಿಸತಕ್ಕದು. ಎಂದು ಆದೇಶಿಸಲಾಗಿದೆ

ಮೇಲೆ ಓದಲಾದ ಕ್ರಮಾಂಕ (2) ರಲ್ಲಿ " vi 'Adequate number of teachers qualifies for each subject shall be provided with overall pupil to teacher (PTR) no exceeding 30 for Primary classes, 40 for secondary classes and 60 for higher secondary classes " ರ ಪ್ರಕಾರ ಸದರಿ ಶಾಲೆಗಳಲ್ಲಿ ನಡೆಯುತ್ತಿರುವ ಪೂರ್ವ ಪ್ರಾಥಮಿಕ LKG & UKG ಹಾಗೂ ದ್ವಿ-ಭಾಷಾ ಮಾಧ್ಯಮದ ತ ರಗತಿಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಯನ್ನು ಗರಿಷ್ಠ 30 ಕ್ಕೆ ಸೀಮಿತಗೊಳಿಸಿದೆ.

ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ದ್ವಿ-ಭಾಷಾ(Bilingual) ತರಗತಿಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತ (PTR ) 30:1ಕ್ಕೆ ಅನುಗುಣವಾಗಿ ಪ್ರತಿ ತರಗತಿಗೆ 30 ವಿದ್ಯಾರ್ಥಿಗಳಂತೆ ದಾಖಲಾತಿ ಪ್ರಕ್ರಿಯೆ ನಡೆಸುವುದು. ದಾಖಲಾತಿಗೆ ಹೆಚ್ಚಿನ ಬೇಡಿಕೆ ಬಂದಲ್ಲಿ ಲಾಟರಿ ಪ್ರಕ್ರಿಯೆ ಮೂಲಕ ದಾಖಲಾತಿ ನಡೆಸತಕ್ಕದು ಎಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (4) ರಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ (KPS) ಗಳಲ್ಲಿ ಈಗಾಗಲೇ ಪ್ರಾರಂಭಿಸಿರುವ ದ್ವಿ-ಭಾಷಾ ಮಾಧ್ಯಮದ ತರಗತಿಗಳ ಜೊತೆಯಲ್ಲಿ ದಾಖಲಾತಿ ಹೆಚ್ಚಳದಿಂದಾಗಿ ಒಟ್ಟು **42** ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ಪೂರ್ವ ಪ್ರಾಥಮಿಕ (ಎಲ್.ಕೆ.ಜಿ) & **51** ಕರ್ನಾಟಕ ಪಬ್ಲಿಕ್ ಶಾಲೆ (KPS)ಗಳಲ್ಲಿ 1 ನೇ ತರಗತಿ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ.

ಸರ್ಕಾರಿ ಶಾಲೆಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಕ್ರೋಢಿಕರಿಸಿ ಸಂಪನ್ಮೂಲಗಳ ಗರಿಷ್ಠ ಬಳಕೆ ಮಾಡಿ ಹೆಚ್ಚಿನ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಸರ್ಕಾರದ ಜವಾಬ್ದಾರಿಯಾಗಿರುತ್ತದೆ ಹಾಗೂ ಸಾಂವಿಧಾನಿಕ ಭಾದ್ಯತೆಯನ್ನು ಹೊಂದಿರುತ್ತದೆ. ಕೇಂದ್ರಿಯ ವಿದ್ಯಾಲಯ ಮತ್ತು ನವೋದಯ ಶಾಲೆಗಳು ಈ ರೀತಿ ಹೆಚ್ಚಿನ ಮಕ್ಕಳ ದಾಖಲಾತಿಗೆ ಅವಕಾಶ ಕಲ್ಪಿಸಿ, ಯಶಸ್ಸು ಹೊಂದಿವೆ.

ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಆಂಗ್ಲ ಮಾಧ್ಯಮದ ದ್ವಿಭಾಷಾ ಮಾಧ್ಯಮ (Bilingual) ತರಗತಿಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಾದ ಹಿನ್ನೆಲೆಯಲ್ಲಿ SDMC ಮತ್ತು ಪೋಷಕರ ಹಾಗೂ ಜನಪ್ರತಿನಿಧಿಗಳ ಬೇಡಿಕೆಯನುಸಾರ ಸದರಿ ಕರ್ನಾಟಕ ಪಬ್ಲಿಕ್ ಶಾಲೆ (KPS) ಗಳಲ್ಲಿ ಎಲ್.ಕೆ.ಜಿ & ಪ್ರಾಥಮಿಕ ತರಗತಿಗಳಲ್ಲಿ ಪ್ರಸ್ತುತ ಗರಿಷ್ಠ 30 ವಿದ್ಯಾರ್ಥಿಗಳ ದಾಖಲಾತಿಯ ಮಿತಿ ಇದ್ದು, ಇದನ್ನು ಹೆಚ್ಚಿಸಲು ಕೋರಿರುತ್ತಾರೆ. ಈ ಹಿನ್ನಲೆಯಲ್ಲಿ ಸದರಿ , ಕರ್ನಾಟಕ ಪಬ್ಲಿಕ್ ಶಾಲೆ (KPS) ಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಯಿಂದ 10ನೇ ತರಗತಿಯವರೆಗೆ, ತರಗತಿವಾರು ವಿದ್ಯಾರ್ಥಿಗಳ ದಾಖಲಾತಿ 50 ಕ್ಕೆ ಹೆಚ್ಚಳ ಮಾಡುವ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರಿಂದ ಪ್ರಸ್ತಾವನೆ ಸ್ವೀಕತವಾಗಿರುತ್ತದೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 62 ಎಂಪಿಇ 2025,**
**ಬೆಂಗಳೂರು, ದಿನಾಂಕ:19.06.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪಬ್ಲಿಕ್ ಶಾಲೆ, (KPS), ಬೆಂಗಳೂರು ಪಬ್ಲಿಕ್ ಶಾಲೆ (BPS) ಹಾಗೂ ಪಿ.ಎಂ ಶ್ರೀ ಶಾಲೆಗಳಲ್ಲಿ ದ್ವಿ-ಭಾಷಾ

-3-

ವೆಂಕಟ್

ಮಾಧ್ಯಮದ (Bilingual Classes) ತರಗತಿಗಳಿಗೆ ಮಕ್ಕಳ ಗರಿಷ್ಠ ದಾಖಲಾತಿ ಮಿತಿಯನ್ನು ಈ ಕೆಳಕಂಡಂತೆ ಹೆಚ್ಚಿಸಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿಸಿದೆ.

| ಕ್ರಮ ಸಂಖ್ಯೆ | ವಿಭಾಗ | ತರಗತಿ ಗರಿಷ್ಠ ಮಿತಿ |
|---|---|---|
| 1. | ಪೂರ್ವ ಪ್ರಾಥಮಿಕ ಶಾಲೆ | 40 |
| 2. | ಪ್ರಾಥಮಿಕ ಶಾಲೆ | 50 |
| 3. | ಪ್ರೌಢ ಶಾಲೆ | 50 |

**ಷರತ್ತುಗಳು:-**

- 2025-26ನೇ ಶೈಕ್ಷಣಿಕ ಸಾಲಿನಿಂದಲೇ ಮೇಲಿನಂತೆ ಎಲ್ಲಾ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳದ ಮಿತಿಯ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರು ಸುತ್ತೋಲೆ ಹೊರಡಿಸಿ ನಿಯಮಗಳಂತೆ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.
- ಪೂರ್ವ ಪ್ರಾಥಮಿಕ ವಿಭಾಗದ ಪ್ರತಿ ತರಗತಿಯ ಶಿಕ್ಷಕ/ಶಿಕ್ಷಕಿಯ ಜೊತೆ ಒಂದು ಆಯಾ ಕಡ್ಡಾಯವಾಗಿ ಇರತಕ್ಕದ್ದು.
- ಶಾಲಾ ಆವರಣದಲ್ಲಿ ಲಭ್ಯವಿರುವ ಕಟ್ಟಡಗಳನ್ನು ಹಾಗೂ ಇನ್ನಿತರ ಸಂಪನ್ಮೂಲಗಳನ್ನು ಬಳಸಿಕೊಂಡು ಮಕ್ಕಳ ದಾಖಲಾತಿ ಹಾಗು ವಿದ್ಯಾಭ್ಯಾಸಕ್ಕಾಗಿ ಎಲ್ಲಾ ರೀತಿಯ ಅವಕಾಶ ಮಾಡಿ ಕೊಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19.06.2025
ವೈ ಸಿ ರವಿಕುಮಾರ್
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಆಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ / ಕಲಬುರುಗಿ.

-4-

5. ನಿರ್ದೇಶಕರು,( ಪದವಿ ಪೂರ್ವ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಪ್ರಾಥಮಿಕ / ಪ್ರೌಢ ಶಿಕ್ಷಣ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.

7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ 7 & 8), ವಿಧಾನಸೌಧ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
10. ಸಾಪ್ತಾಹಿಕ ರಾಜ್ಯ ಪತ್ರ / ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.
11. ಇ-ಆಡಳಿತ ಶಾಖೆಯು ಸರ್ಕಾರದ ಆದೇಶವನ್ನು ಇಲಾಖೆ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.

**ಪ್ರತಿ ಮಾಹಿತಿಗಾಗಿ.**

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಂಗಳೂರು.